# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂ. 190–ಮಂಗಮ್ಮನಪಾಳ್ಯ

### ವಾರ್ಡ್ ಸಮಿತಿ ಸಭೆಯ ನಡವಳಿಗಳು

ಮಾನ್ಯ ಅಧ್ಯಕ್ಷರು/ನೋಡಲ್ ಅಧಿಕಾರಿ, ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 21.04.2022 ಗುರುವಾರ ಬೆಳಗ್ಗೆ 11.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಹೆಚ್.ಎಸ್.ಆರ್ ಉಪವಿಭಾಗ (ವಾರ್ಡ್ ಕಛೇರಿ) 9ನೇ ಮುಖ್ಯ ರಸ್ತೆ, 14ನೇ ಅಡ್ಡ ರಸ್ತೆ, 6ನೇ ಸೆಕ್ಟರ್, ಹೆಚ್.ಎಸ್.ಆರ್ ಬಡಾವಣೆ, ಬೆಂಗಳೂರು-560102, ರಲ್ಲಿ ನಡೆಸಿದ ವಾರ್ಡ್ ಸಂಖ್ಯೆ: 190–ಮಂಗಮ್ಮನಪಾಳ್ಯ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಉಪಸ್ಥಿತರು:**

**ಹಾಜರಿದ್ದ ಅಧ್ಯಕ್ಷರು/ನೋಡಲ್ ಅಧಿಕಾರಿಗಳು, ಸಹಾಯಕ ಅಭಿಯಂತರರು / ಕಾರ್ಯದರ್ಶಿ, ಸದ್ಯಸರುಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು**

| ಕ್ರ.ಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ ಟಿ ಹನುಮಂತರಾಯ | ವಾರ್ಡ್ ನೋಡಲ್ ಅಧಿಕಾರಿ (ಎ.ಇ.ಇ) | 8105005285 |
| 2 | ಶ್ರೀ ರಾಜಗೋಪಲ್ ಬಾಬು.ಎನ್ | ಕಾರ್ಯದರ್ಶಿ, ಸಹಾಯಕ ಅಭಿಯಂತರರು ವಾರ್ಡ್ ಸಂ.190 | 9480688190 |
| 3 | ಶ್ರೀ ಸೈಯದ್ ಸಲಾಂ | ಸದಸ್ಯರು | 9035084140 |
| 4 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು | 9900388075 |
| 5 | ಶ್ರೀ ಗೋಪಿನಾಥ್ | ಸದಸ್ಯರು | 9243111520 |
| 6 | ಶ್ರೀ ಚಂದ್ರ ರೆಡ್ಡಿ | ಸದಸ್ಯರು | 9900115285 |
| 7 | ಶ್ರೀ ಉಮೇಶ್ | ಸದಸ್ಯರು | 9342509899 |
| 8 | ಶ್ರೀ ಟಿ..ಎ ಮೌಲಸಾಬ್ | ಕಲ್ಯಾಣ ಕ್ಷೇಮಾಭಿವೃದ್ಧಿ ಸಂಘ | 990034140 |
| 9 | ಶ್ರೀ ಸಂತೋಷ ಪ್ರಸಾದ್ ಎಂ. | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ | 9845444154 |
| 10 | ಶ್ರೀ ದಿನೇಶ್ ಎಂ. | ಸಹಾಯಕ ಅಭಿಯಂತರರು, ಬೆಸ್ಕಾಂ | 9663681647 |
| 11 | ಶ್ರೀ ಅಣವೀರ್ | ಎ.ಎಸ್.ಐ ಬಂಡೇಪಾಳ್ಯ ಪೋಲಿಸ್ ಠಾಣೆ | 9945576698 |
| 12 | ಶ್ರೀ ಸೀರಾಜ್ ಅಹ್ಮದ್ | ಎ.ಎಸ್.ಐ ಸಂಚಾರಿ ಪೋಲಿಸ್ ಠಾಣೆ ಎಲೆಕ್ಟ್ರಾನಿಕ್ ಸಿಟಿ | 9945147597 |
| 13 | ಶ್ರೀ ಡಿ ವಿಜಯಕುಮಾರ್ | ಕಿರಿಯ ಅಭಿಯಂತರರು, ಬೆಸ್ಕಾಂ | 9900268649 |
| 14 | ಶ್ರೀ ವಿಕಾಸ ಡಿ.ಎಸ್. | ಕಿರಿಯ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ | 9108239389 |
| 15 | ಶ್ರೀ ರಾಮಚಂದ್ರ | ಸಹಾಯಕ ಕಂದಾಯ ಅಧಿಕಾರಿ | 9480685984 |
| 16 | ಶ್ರೀಮತಿ ಎಂ.ಎಂ. ಭವಾನಿ | ಪಶುಸಂಗೋಪನೆ, ಇನ್ಸ್‌ಪೆಕ್ಟರ್ | 9448504577 |
| 17 | ಶ್ರೀಮತಿ ಸತ್ಯವಾಣಿ | ಕಿರಿಯ ಆರೋಗ್ಯ ಪರಿವೀಕ್ಷಕರು | 8971434331 |
| 18 | ಶ್ರೀ ಹೆಚ್.ನರಸಪ್ಪ | ತೋಟಗಾರಿಕೆ ನಿರೀಕ್ಷಕರು | 8105663239 |
| 19 | ಶ್ರೀ ನಿಜಾಮುದ್ದಿನ್ | ಬೀದಿ ದೀಪ ನಿರ್ವಾಹಕರು | 9611122076 |
| 20 | ಶ್ರೀ ಶಿವಕುಮಾರ್ | ಮಾರ್ಷಲ್ | 8073223596 |

ವಾರ್ಡ್ ಅಧ್ಯಕ್ಷರು/ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ, ಸದಸ್ಯರಿಗೆ ಹಾಗೂ ಸ್ವಯಂ ಸೇವಕರನ್ನು ಸಭೆಗೆ ಸ್ವಾಗತಿಸುತ್ತಾ, ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸುತ್ತಾ, ಸಭೆಯನ್ನು ಆರಂಭಿಸಲಾಯಿತು.

(2....)

Scanned with

- **ಘನತ್ಯಾಜ್ಯ :-**

1. ಹಿಂದಿನ ಸಭೆಯಲ್ಲಿ ಶ್ರೀ ಸೈಯದ್ ಸಲಾಂ ರವರು ಚರ್ಚಿಸಿರುವ ವಿಷಯದ ಬಗ್ಗೆ ಇಂದಿನ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಸತ್ಯವಾಣಿ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ, ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಾರ್ಡ್ ವ್ಯಾಪ್ತಿಯಲ್ಲಿ ಗುಜರಿ ಅಂಗಡಿಯಲ್ಲಿ ಬಯೋ ವೇಸ್ಟ್ ವಿಲೇವಾರಿಗೆ ಬೆಂಕಿ ಹಾಕುತ್ತಿದ್ದು, ಎಲ್ಲಾ ಗುಜರಿ ಅಂಡಿಗಳನ್ನು ಪರಿಶೀಲಿಸಿ ಪರವಾನಗಿ ಪಡೆದುಕೊಳ್ಳದವರಿಗೆ ಅಂಗಡಿಗಳನ್ನು ಮುಚ್ಚುವಂತೆ ತಿಳಿಸಿದರು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು (Action taken Report) ವರದಿಯನ್ನು ಸಲ್ಲಿಸುವಂತೆ ಸೂಚಿಸಿದ್ದರು. ಈ ಬಗ್ಗೆ ಸತ್ಯವಾಣಿ ವಾರ್ಡ್ ಸಂ.174ರ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಹಿರಿಯ ಆರೋಗ್ಯ ಪರಿವೀಕ್ಷಕರು ಬೇರೇ ಕೆಲಸದ ನಿಮಿತ್ಯ ಬಿಬಿಎಂಪಿ ಕೇಂದ್ರ ಕಛೇರಿಗೆ ಹೋಗಿರುವ ಕಾರಣ ನನ್ನನ್ನು ಸಭೆಗೆ ಹಾಜರಾಗಲು ಕೋರಿರುವ ಮೇರೆಗೆ ಸಭೆಗೆ ಹಾಜರಾಗಿದ್ದೇನೆ ಎಂದು ತಿಳಿಸಿದರು. ಈ ಬಗ್ಗೆ ಶ್ರೀ ಸೈಯದ್ ಸಲಾಂ ರವರು ತಾವುಗಳು ಒಂದು ದಿನದ ಉಸ್ತವಾರಿಯಾಗಿ ನೇಮಿಸಿರುವ, ಸಭೆಗೆ ಹಾಜರಾಗಿರುವ ಕಾರಣ ತಮ್ಮಿಂದ ಯಾವುದೇ ಮಾಹಿತಿ ಪಡೆಯಲು ಸಾಧ್ಯವಾಗುವುದಿಲ್ಲವೆಂದು ತಿಳಿಸಿದರು ಮುಂದಿನ ಸಭೆಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಹಾಜರಾಗುವಂತೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ಸಂಚಾರಿ ಪೋಲೀಸ್ ಠಾಣೆ :-**

1. ವಾರ್ಡ್ ವ್ಯಾಪ್ತಿಯ ಮಂಗಮ್ಮನಪಾಳ್ಯ ಕೆರೆಯ ರಸ್ತೆಯ ಬೀದಿಯಲ್ಲಿ ಹಾಗೂ ಇತರೆ ರಸ್ತೆಗಳಲ್ಲಿ ಸುಮಾರು 20 ವರ್ಷಗಳಿಂದ ದ್ವಿಚಕ್ರ ಮತ್ತು ಕಾರುಗಳನ್ನು ನಿಲ್ಲಿಸುತ್ತಿದ್ದು, ಇದನ್ನು ತೆರವುಗೊಳಿಸುವಂತೆ ಹಿಂದಿನ ಸಭೆಯಲ್ಲಿ ಸಹ ಚರ್ಚಿಸಲಾಗಿದೆ ಆದರೂ ಯಾವುದೇ ಕ್ರಮಕೈಗೊಂಡಿರುವುದಿಲ್ಲವೆಂದು ಸದಸ್ಯರಾದ ಶ್ರೀ ಉಮೇಶ್ ಮತ್ತು ಮೌಲಾಸಬ್, ಇತರೆ ಸಾರ್ವಜನಿಕರು ಸಭೆಯ ಗಮನಕ್ಕೆ ತಂದರು ಸಭೆಯಲ್ಲಿ ಹಾಜರಿದ್ದ ಶ್ರೀ ಸೀರಾಜ್ ಅಹ್ಮದ್, ಎ.ಎಸ್.ಐ. ಸಂಚಾರಿ ಪೋಲಿಸ್ ಠಾಣೆ ಎಲೆಕ್ಟ್ರಾನಿಕ್ ಸಿಟಿ ರವರು ಸಂಚಾರಿ ವಿಭಾಗದಲ್ಲಿ ಟೋಯಿಂಗ್ ಮಾಡುವ ವ್ಯವಸ್ಥೆಯನ್ನು ಸುಮಾರು 2 ತಿಂಗಳಿಂದ ರದ್ದುಗೊಳಿಸಲಾಗಿದೆ ಆದ್ದರಿಂದ ಇದನ್ನು ಕಾನೂನು ಸುವ್ಯವಸ್ಥೆ ಪೋಲಿಸ್ ಠಾಣೆ ಅಧಿಕಾರಿಗಳು ಕ್ರಮ ಕೈಗೊಳ್ಳವುದೆಂದು ತಿಳಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಬಂಡೇಪಾಳ್ಯ ಪೋಲಿಸ್ ಠಾಣೆ, ಎ.ಎಸ್.ಐ ಅಣವೀರ್ ರವರು ಟೋಯಿಂಗ್ ಮಾಡಲು ವಾಹನ ವ್ಯವಸ್ಥೆ ಮಾಡಿ ಆದಷ್ಟು ಬೇಗ ವಾಹನಗಳನ್ನು ಸ್ಥಳಾಂತರಗೊಳಿಸಲಾಗುವುದೆಂದು ತಿಳಿಸಿರುತ್ತಾರೆ.

- **ಪಶುಸಂಗೋಪನೆ**

1. ಹಿಂದಿನ ಸಭೆಯಲ್ಲಿ ಶ್ರೀ ಸೈಯದ್ ಸಲಾಂ ರವರು ಚರ್ಚಿಸಿರುವ ವಿಷಯದ ಬಗ್ಗೆ ಇಂದಿನ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಶ್ರೀಮತಿ ಎಂ.ಎಂ. ಭವಾನಿ ಪಶುಸಂಗೋಪಾನೆ ಇನ್ಸ್‌ಪೆಕ್ಟರ್ ರವರಿಗೆ ಹಿಂದಿನ ಸಭೆಗಳಲ್ಲಿ ಚರ್ಚಿಸಿರುವ ಬಗ್ಗೆ ತೆಗೆದುಕೊಂಡ ಕ್ರಮಗಳೇನು (Action taken Report) ವರದಿಯನ್ನು ಸಲ್ಲಿಸುವಂತೆ ಸೂಚಿಸಿದ್ದರು. ಈ ಬಗ್ಗೆ ಶ್ರೀಮತಿ ಎಂ.ಎಂ. ಭವಾನಿ ಇನ್ಸ್‌ಪೆಕ್ಟರ್ ರವರು ಇತ್ತೀಚಿಗೆ ಕರ್ತವ್ಯಕ್ಕೆ ಹಾಜರಾಗಿರುವ ಕಾರಣ ಹಿಂದಿನ ಸಭೆಗೆ ಹಾಜರಾಗಿರುವ ಅಧಿಕಾರಿ/ಸಿಬ್ಬಂದಿ ವರ್ಗದವರಿಂದ ಮಾಹಿತಿಯನ್ನು ಪಡೆದುಕೊಂಡು ಮುಂದಿನ ಸಭೆಯಲ್ಲಿ ಸಲ್ಲಿಸಲಾಗುವುದೆಂದು ತಿಳಿಸಿರುತ್ತಾರೆ. ಈ ಬಗ್ಗೆ ಶ್ರೀ ಮೌಲಾಸಬಾ, ಶ್ರೀ ಉಮೇಶ್ ರವರು ತಾವುಗಳು ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಪುಸ್ತಕದಲ್ಲಿ ನಮೂದಿಸಿಕೊಂಡು, ಸಭೆಗೆ ಮಾಹಿತಿಯನ್ನು ಒದಗಿಸಬೇಕು, ಇಲ್ಲವಾದಲ್ಲಿ ಮಾಹಿತಿಯನ್ನು ಪಡೆದುಕೊಳ್ಳಲು ಸಾಧ್ಯವಾಗುವುದಿಲ್ಲ ಹಾಗೂ ಸಭೆಯಲ್ಲಿ ಚರ್ಚಿಸಿರುವ ವಿಷಯಗಳು ಯಾವುದು ಕಾರ್ಯ ರೂಪಕ್ಕೆ ಬರುವುದಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿರುತ್ತಾರೆ. ಈ ಬಗ್ಗೆ ನೋಡಲ್ ಅಧಿಕಾರಿಗಳು ಮುಂದಿನ ಸಭೆಗೆ ಮಾಹಿತಿಯನ್ನು ಪಡೆದುಕೊಂಡು ಸಭೆಗೆ ಹಾಜರಾಗಬೇಕೆಂದು ಸೂಚಿಸಿರುತ್ತಾರೆ.

(3.....)

Scanned with

- <u>ಬೀದಿ ದೀಪ</u>

1. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರ, ಅವಧಿಯು ಪೂರ್ಣಗೊಂಡಿದ್ದು, ಹೊಸದಾಗಿ ಬಂದರಿರುವ ಗುತ್ತಿಗೆದಾರರು/ದುರಸ್ಥಿ-ನಿರ್ವಹಣೆ ಕಾರ್ಯಕ್ಕೆ ನಿಯೋಜಿಸಿರುವ ತಂಡದವವರು ಸುಮಾರು ಒಂದುವಾರದೊಳಗೆ 40-50 ಬೀದಿ ದೀಪ ದುರಸ್ಥಿ ಪಡಿಸಿದ್ದು, ಈ ಬಗ್ಗೆ ವಾರ್ಡ್‌ನಲ್ಲಿ ಬೀದಿ ದೀಪಗಳ ನಿರ್ವಹಣೆ ಕಾರ್ಯ ಸುಗಮವಾಗಿ ನಡೆಯುತ್ತಿದೆ ಎಂದು ಸಭೆಯಲ್ಲಿ ಹಾಜರಿದ್ದ ಸದಸ್ಯರಾದ ಶ್ರೀ ಸ್ಯೆಯದ್ ಸಲಾಂ, ಚಂದ್ರರೆಡ್ಡಿ, ಉಮೇಶ್, ಸುರೇಶ್ ರೆಡ್ಡಿ ರವರು ಮೆಚ್ಚುಗೆ ವ್ಯಕ್ತಪಡಿಸಿದ್ದರು, ಈ ಬಗ್ಗೆ ನೋಡಲ್ ಅಧಿಕಾರಿಗಳು ಇನ್ನಷ್ಟು ಉತ್ತಮ ಕಾರ್ಯಕ್ಕೆ ಸಹಕರಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಬೀದಿ ದೀಪ ನಿರ್ವಹಣೆ ತಂಡದ ಸದಸ್ಯರಾದ ನಿಜಾಮುದ್ದಿನ ರವರಿಗೆ ಸೂಚಿಸಿರುತ್ತಾರೆ.

- <u>ಬಿ.ಡಬ್ಲ್ಯೂ.ಎಸ್.ಎಸ್.ಬಿ.</u>

1. ಬೇಸಿಗೆ ಕಾಲ ಸಮೀಪಿಸುತ್ತಿರುವುದರಿಂದ ವಾರಕ್ಕೆ 2 ರಿಂದ 3 ದಿನಗಳಿಗೊಮ್ಮೆ ಕುಡಿಯುವ ನೀರಿನ್ನು ಬಿಡುವಂತೆ ಈಗಾಗಲೇ ಅಧ್ಯಕ್ಷರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಮತ್ತು ಸಂಬಂಧಪಟ್ಟ ಅಭಿಯಂತರರಿಗೆ ಅರ್ಜಿಯನ್ನು ನೀಡಿದ್ದರೂ ಸಹ 8-10 ದಿನಕ್ಕೊಮ್ಮೆ ಕುಡಿಯುವ ನೀರನ್ನು ಬಿಡುತ್ತಿದ್ದು, ಇದರಿಂದ ಸ್ಥಳೀಯ ನಿವಾಸಿಗಳಿಗೆ, ಮಕ್ಕಳಿಗೆ, ಹಿರಿಯ ನಾಗರೀಕರಿಗೆ ತುಂಬಾ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ಶ್ರೀ ಸ್ಯೆಯದ್ ಸಲಾಂ ಮತ್ತು ಇತರೆ ವಾರ್ಡ್ ಸದಸ್ಯರು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಸಹಾಯಕ ಅಭಿಯಂತರಾದ ಸಾಯಿಬಣ್ಣ ಜಾಗಕ್ಕೆ ನಿಯುಕ್ತಿಗೊಳಿಸಿರುವ ಕಿರಿಯ ಅಭಿಯಂತರರಾದ ಶ್ರೀ ವಿಕಾಸ್. ಡಿ.ಎಸ್. ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಲ್ಲಿ ಸಂಪೂರ್ಣವಾದ ಮಾಹಿತಿ ಇಲ್ಲದೆ ಇರುವುದರಿಂದ ಸದಸ್ಯರಾದ ಶ್ರೀ ಸ್ಯೆಯದ ಸಲಾಂ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರಾದ, ಶ್ರೀ ನಾಗರಾಜ ರವರಿಗೆ ದೂರವಾಣಿ ಮುಖಾಂತರ ಕರೆ ಮಾಡಿ ಮಾಹಿತಿಯನ್ನು ಒದಗಿಸುವಂತೆ ಹಾಗೂ ಈ ಬಗ್ಗೆ ಮಧ್ಯಾಹ್ನ 2.30ಕ್ಕೆ ಸಭೆ ಹಮ್ಮಿಕೊಂಡು ಸಮಸ್ಯೆ ಬಗ್ಗೆ ಹರಿಸಬೇಕೆಂದು ಕೋರಿರುತ್ತಾರೆ. ಶ್ರೀ ವಿಕಾಸ್. ಡಿ ಸಹಾಯಕ ಅಭಿಯಂತರರಿಗೆ ಸದರಿ ಸಭೆಗೆ ಹಾಜರಾಗಿ ವಾರ್ಡ್ ವ್ಯಾಪ್ತಿಯಲ್ಲಿರುವ ಸಮಸ್ಯೆಗಳ ಬಗ್ಗೆ ಸಂಪೂರ್ಣ ತಿಳಿದುಕೊಂಡು ಕ್ರಮ ಕೈಗೊಳ್ಳವಂತೆ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.

- <u>ಕಂದಾಯ ಇಲಾಖೆ</u>

1. ಹಿಂದಿನ ಸಭೆಯಲ್ಲಿ ಚರ್ಚಿಸಿರುವ ಬಗ್ಗೆ ಇಂದಿನ ಸಭೆಯಲ್ಲಿ ಸರ್ವೆ ನಂ. 44ರ ಬೌಂಡರಿ ಗುರುತಿಸಿಕೊಡಲು ಪ್ರಸ್ತಾಪಿಸಲಾಗಿದ್ದು, ಈ ಬಗ್ಗೆ ಶ್ರೀ ಸ್ಯೆಯದ್ ಸಲಾಂ ಶ್ರೀ ಉಮೇಶ್, ಶ್ರೀ ಚಂದ್ರಾರೆಡ್ಡಿ, ಶ್ರೀ ಸುರೇಶ್ ರೆಡ್ಡಿ ಮತ್ತು ಇತರೆ ಸದಸ್ಯರು ಸಭೆಯಲ್ಲಿ ಹಾಜರಿದ್ದ ಶ್ರೀ ರಾಮಚಂದ್ರ, ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಎಸ್.ಆರ್ ಉಪವಿಭಾಗ ರವರಿಗೆ ಮಾಹಿತಿಯನ್ನು ಒದಗಿಸುವಂತೆ ಕೋರಿರುತ್ತಾರೆ. ಈ ಬಗ್ಗೆ ಶ್ರೀ ರಾಮಚಂದ್ರ, ಸಹಾಯಕ ಕಂದಾಯ ಅಧಿಕಾರಿಗಳು, ರಾಜಸ್ವ ನೀರಿಕ್ಷಕರು ರವರಿಗೆ ಪತ್ರ ಬರೆಯಲಾಗಿದೆ. ಅವರಿಂದ ಮಾಹಿತಿ ಬಂದ ನಂತರ ಮಾಹಿತಿ ಒದಗಿಸಲಾಗುವುದೆಂದು ತಿಳಿಸಿರುತ್ತಾರೆ. ಸದಸ್ಯರುಗಳು ಹಿಂದಿನ ಸಭೆಯಲ್ಲಿ ರಾಜಸ್ವ ನಿರೀಕ್ಷಕರಿಗೆ ಸಭೆಗೆ ಹಾಜರಾಗುವಂತೆ ಆಹ್ವಾನಿಸಲು ಸೂಚಿಸಿದ್ದರು ಸಹ ಸಭೆಗೆ ಆಹ್ವಾನಿಸಿರುವುದಿಲ್ಲವೆಂದು ಆಕ್ಷೇಪ ವ್ಯಕ್ತ ಪಡಿಸಿರುತ್ತಾರೆ. ಈ ಬಗ್ಗೆ ನೋಡಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ಸಭೆಗೆ ಆಹ್ವಾನಿಸಲು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿರುತ್ತಾರೆ.
2. ಶ್ರೀ ಸ್ಯೆಯದ್ ಸಲಾಂ ರವರು ಸಹಾಯಕ ಕಂದಾಯ ಅಧಿಕಾರಿಗಳಿಗೆ ನೀವು ಕರ್ತವ್ಯಕ್ಕೆ ಹಾಜಗಿರುವ ದಿನದಿಂದ ಎಷ್ಟು ನಿವೇಶನಗಳಿಗೆ "ಖಾತಾ" ನೀಡಲಾಗಿದೆ, ಖಾತಾ ವರ್ಗಾವಣೆ ಮಾಡಿರುವ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಮೀನಿನ (ರಾಮ ದೇವಸ್ಥಾನಕ್ಕಾಗಿ ಮೀಸಲಿಟ್ಟಿರುವ) ಜಾಗದ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಸಭೆಗೆ ಒದಗಿಸಲು ಕೋರಿದರು.
3. ಮತದಾರರ ಗುರುತಿನ ಚೀಟಿಗಳನ್ನು ಹೊಸದಾಗಿ ಪಡೆಯಲು ದಿನದ 24 ಗಂಟೆಯ ಕಾಲ Online ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಇದನ್ನು ಬಿ.ಎಲ್.ಓ ಮತ್ತು ಕಂದಾಯ ವಸೂಲಿಗಾರರು ಸಲ್ಲಿಸಿರುವ ದಾಖಲಾತಿಗಳನ್ನು ಪರಿಶೀಲಿಸಿದ ನಂತರ ಅನುಮೋದನೆ ನೀಡಲಾಗುತ್ತದೆ ಎಂದು ಸಭೆಯಲ್ಲಿ ಶ್ರೀ ಸಹಾಯಕ ಕಂದಾಯ ಅಧಿಕಾರಿಗಳು ರವರು ತಿಳಿಸಿದರು ಈ ಬಗ್ಗೆ ತಾವುಗಳು ಅರ್ಜಿಗಳನ್ನು ಪರಿಶೀಲಿಸದೆ ಕ್ರಮ ಕೈಗೊಳ್ಳುತ್ತಿರುವ ಬಗ್ಗೆ ದೂರು ಬಂದಿರುತ್ತದೆ. ಆದ್ದರಿಂದ ಖುದ್ದಾಗಿ ಅರ್ಜಿಗಳನ್ನು ಪರಿಶೀಲಿಸಿ, ದಾಖಲಾದ ಅರ್ಜಿಗಳನ್ನು ರದ್ದುಗೊಳಿಸಿ ಕಾನೂನು ರೀತಿ ಕ್ರಮಕೈಗೊಳ್ಳಲು ಕೋರಿದ್ದರು. ಈ ಬಗ್ಗೆ ಸಹಾಯಕ ಕಂದಾಯ ಅಧಿಕಾರಿಗಳು ಕ್ರಮ ಕೈಗೊಳ್ಳಲಾಗುವುದಾಗಿ ಸಭೆಗೆ ತಿಳಿಸಿದರು.

(4.....)

Scanned with

- ಕಾಮಗಾರಿ :
  1. ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಡಾಂಬರೀಕರಣಗೊಳಿಸಿರುವ ರಸ್ತೆಗಳನ್ನು ಅಗೆದು ಓ.ಎಫ್.ಸಿ ಕೇಬಲ್‌ಗಳನ್ನು ಅಳವಡಿಸುತ್ತಿದ್ದಾರೆ ಈ ಬಗ್ಗೆ ಸಹಾಯಕ ಅಭಿಯಂತರರು. ಸೂಕ್ತ ಕ್ರಮ ವಹಿಸಬೇಕೆಂದು ಶ್ರೀ ಸೈಯದ್ ಸಲಾಂ. ಶ್ರೀ ಗೋಪಿನಾಥ. ಶ್ರೀ ಉಮೇಶ್ ಮತ್ತು ಇತರೆ ಸದಸ್ಯರು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಸಹಾಯಕ ಅಭಿಯಂತರರು/ಕಾರ್ಯದರ್ಶಿಗಳು ರವರು ಓ.ಎಫ್.ಸಿ ಕೇಬಲ್ ಅಳವಡಿಸಲು ಅನುಮತಿಗಾಗಿ ಕೇಂದ್ರ ಕಛೇರಿ ಓ.ಎಫ್.ಸಿ ಕೋಶದಿಂದ ಅನುಮತಿಯನ್ನು ಪಡೆಯಬಹುದಾಗಿರುತ್ತದೆ ಈ ಬಗ್ಗೆ ಸಂಪೂರ್ಣ ಮಾಹಿತಿ ಲಭ್ಯವಿರುವುದಿಲ್ಲ. ಆದ್ಯಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಕೇಬಲ್ ಅಳವಡಿಸುವ ಕಾರ್ಯವನ್ನು ಸ್ಥಗಿತಗೊಳಿಸಿ ಸಾಮಾಗ್ರಿಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿರುತ್ತಾರೆ.

- ತೋಟಗಾರಿಕೆ
  1. ವಾರ್ಡ್ ವ್ಯಾಪ್ತಿಯ ಐ.ಟಿ.ಐ ಬಡಾವಣೆಯ. ಕುವೆಂಪು ಉದ್ಯಾನವನದಲ್ಲಿ ಇರುವ ಬೋರ್‌ವೆಲ್ ನಿರ್ವಹಣೆ. ಬೆಸ್ಕಾಂ ವಿದ್ಯುತ್ ಬಿಲ್ ಪಾವತಿಸಿರುವುದಿಲ್ಲವೆಂದು ಶ್ರೀಗೋಪಿನಾಥ ಸದಸ್ಯರು ಸಭೆಯ ಗಮನಕ್ಕೆ ತಂದಿರುತ್ತಾರೆ. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ತೋಟಗಾರಿಕೆ ನಿರೀಕ್ಷಕರು ರವರು ಸಂಬಂಧಪಟ್ಟ ಇಲಾಖೆಗೆ ಬಿಲ್‌ನ್ನು ಪಾವತಿಸುವ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ. ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಸದಸ್ಯರಿಗೆ. ಸಾರ್ವಜನಿಕರಿಗೆ ಮತ್ತು ಅಧಿಕಾರಿ ಸಿಬ್ಬಂದಿ ವರ್ಗದವರಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

N. Rajagopala Babu

ಕಾರ್ಯದರ್ಶಿ. ವಾರ್ಡ್ ನಂ.190ರ
ಸಹಾಯಕ ಅಭಿಯಂತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು/ನೋಡಲ್ ಅಧಿಕಾರಿ ವಾರ್ಡ್ ನಂ.190
ಮಂಗಮ್ಮನಪಾಳ್ಯ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-

1. ಮಾನ್ಯ ಆಡಳಿತಗಾರರು. ಬಿ.ಬಿ.ಎಂ.ಪಿ. ರವರ ಅಪ್ತ ಶಾಖೆಗೆ ಸಲ್ಲಿಸಿದೆ
2. ಮಾನ್ಯ ಮುಖ್ಯ ಆಯುಕ್ತರು. ಬಿ.ಬಿ.ಎಂ.ಪಿ.ರವರ ಅಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ವಲಯ ಆಯುಕ್ತರು. ಬೊಮ್ಮನಹಳ್ಳಿ ವಲಯ ರವರ ಅಪ್ತ ಶಾಖೆಗೆ ಸಲ್ಲಿಸಿದೆ
4. ಮಾನ್ಯ ವಿಶೇಷ ಆಯುಕ್ತರು. (ಆಡಳಿತ) ರವರ ಅಪ್ತ ಶಾಖೆಗೆ ಸಲ್ಲಿಸಿದೆ.
5. ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
6. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.

Scanned with